Akashvani : Bengaluru
National Bulletin In Kannada
09.10.2025 : 1310hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

09.10.2025 : 1310hrs

*******

ಮುಖ್ಯಾಂಶಗಳು

೧. ಬ್ರಿಟನ್ ಪ್ರಧಾನಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ; ಭಾರತ-ಬ್ರಿಟನ್ ಸಮಗ್ರ ಪಾಲುದಾರಿಕೆಯ ಪ್ರಗತಿ ಪರಿಶೀಲನೆ

೨. ಪ್ರಮುಖ ರಕ್ಷಣಾ ಒಪ್ಪಂದಗಳಿಗೆ ಭಾರತ-ಆಸ್ಟ್ರೇಲಿಯಾ ಸಹಿ

೩. ಇಸ್ರೇಲ್-ಹಮಾಸ್ ಶಾಂತಿ ಒಪ್ಪಂದ ಸ್ವಾಗತಿಸಿದ ಭಾರತ

೪. ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ; ಇಂದಿನ ಪಂದ್ಯದಲ್ಲಿ ಭಾರತ-ದಕ್ಷಿಣ ಆಫ್ರಿಕಾ ಮುಖಾಮುಖಿ

***************

ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಇಂದು ಮುಂಬೈನಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಮಾತುಕತೆಗಳ ಸಮಯದಲ್ಲಿ, ಉಭಯ ನಾಯಕರು 'ವಿಷನ್ ೨೦೩೫' ಕ್ಕೆ ಅನುಗುಣವಾಗಿ ಭಾರತ-ಬ್ರಿಟನ್ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ವೈವಿಧ್ಯಮಯ ಅಂಶಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಿದರು. 'ವಿಷನ್ ೨೦೩೫' ವ್ಯಾಪಾರ ಮತ್ತು ಹೂಡಿಕೆ, ತಂತ್ರಜ್ಞಾನ ಮತ್ತು ನಾವೀನ್ಯತೆ, ರಕ್ಷಣೆ ಮತ್ತು ಭದ್ರತೆ, ಹವಾಮಾನ ಮತ್ತು ಇಂಧನ, ಆರೋಗ್ಯ, ಶಿಕ್ಷಣ ಮತ್ತು ಜನರ ನಡುವಿನ ಸಂಬಂಧಗಳ ಕುರಿತ ಪ್ರಮುಖ ಕಾರ್ಯಕ್ರಮಗಳು ಮತ್ತು ಉಪಕ್ರಮಗಳ ಕೇಂದ್ರೀಕೃತ ಮತ್ತು ಸಮಯಬದ್ಧ ೧೦ ವರ್ಷಗಳ ಮಾರ್ಗಸೂಚಿಯಾಗಿದೆ. ಭವಿಷ್ಯದ ಭಾರತ-ಬ್ರಿಟನ್ ಆರ್ಥಿಕ ಪಾಲುದಾರಿಕೆಯ ಕೇಂದ್ರ ಸ್ತಂಭವಾಗಿ ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ಕುರಿತು ಉಭಯ

ನಾಯಕರು, ಉದ್ಯಮ ನಾಯಕರೊಂದಿಗೆ ಸಭೆ ನಡೆಸಿದರು. ನಂತರ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು.

**ಧ್ವನಿ : ಪ್ರಧಾನಿ ಮೋದಿ (೨೩ ಸೆಕೆಂಡ್‌ಗಳು)**

ಇದೇ ವೇಳೆ ಉಭಯ ನಾಯಕರು ಪ್ರಾದೇಶಿಕ ಮತ್ತು ಜಾಗತಿಕ ಪ್ರಾಮುಖ್ಯತೆಯ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಅಲ್ಲದೇ ಉದ್ಯಮ ತಜ್ಞರು, ನೀತಿ ನಿರೂಪಕರು ಮತ್ತು ನಾವೀನ್ಯಕಾರರೊಂದಿಗೆ ಸಂವಾದ ನಡೆಸಿದರು. ನಂತರ ಪ್ರಧಾನಿ ಮೋದಿ ಮತ್ತು ಪ್ರಧಾನಿ ಸ್ಟಾರ್ಮರ್ ಇಂದು ಮುಂಬೈನಲ್ಲಿ ನಡೆಯಲಿರುವ ೬ನೇ ಗ್ಲೋಬಲ್ ಫಿನ್‌ಟೆಕ್ ಫೆಸ್ಟ್‌ನಲ್ಲಿ ಭಾಗವಹಿಸಿ, ಪ್ರಮುಖ ಭಾಷಣ ಮಾಡಲಿದ್ದಾರೆ.

****************

ಭಾರತ ಮತ್ತು ಆಸ್ಟ್ರೇಲಿಯಾ ಪ್ರಮುಖ ರಕ್ಷಣಾ ಒಪ್ಪಂದಗಳಿಗೆ ಸಹಿ ಹಾಕಿವೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಆಸ್ಟ್ರೇಲಿಯಾ ಉಪಪ್ರಧಾನಿ ಮತ್ತು ರಕ್ಷಣಾ ಸಚಿವ ರಿಚರ್ಡ್ ಮಾರ್ಲೆಸ್ ಅವರ ಸಮ್ಮುಖದಲ್ಲಿ ಪ್ರಮುಖ ರಕ್ಷಣಾ ಒಪ್ಪಂಗಳಿಗೆ ಸಹಿ ಹಾಕಲಾಯಿತು. ಇದೇ ವೇಳೆ ಉಭಯ ನಾಯಕರು ದ್ವಿಪಕ್ಷೀಯ ಮಾತುಕತೆ ನಡೆಸಿದರು. ರಕ್ಷಣಾ ಉದ್ಯಮ ಸೈಬರ್ ರಕ್ಷಣೆ ಕಡಲ ಭದ್ರತೆ ಪ್ರಾದೇಶಿಕ ಸವಾಲುಗಳು ಸೇರಿದಂತೆ ಭಾರತ-ಆಸ್ಟ್ರೇಲಿಯ ರಕ್ಷಣಾ ಸಹಕಾರದ ಪ್ರಗತಿ ಕುರಿತು ಪರಿಶೀಲನೆ ನಡೆಸಿದರು. ಅಲ್ಲದೇ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ಮಹತ್ವವನ್ನು ಉಭಯ ನಾಯಕರು ಪುನರುಚ್ಚರಿಸಿದರು. ಗಡಿಯಾಚೆಗಿನ ಭಯೋತ್ಪಾದನೆ ಮತ್ತು ಪ್ರಾದೇಶಿಕ ಸ್ಥಿರತೆ ಮೇಲೆ ಆಸ್ಟ್ರೇಲಿಯಾದ ದೃಢವಾದ ಬೆಂಬಲಕ್ಕಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಧನ್ಯವಾದ ಸಲ್ಲಿಸಿದರು. ಭಾರತದೊಂದಿಗೆ ಸಹಿ ಹಾಕಲಾದ ರಕ್ಷಣಾ ಒಪ್ಪಂದವು ಎರಡೂ ರಾಷ್ಟ್ರಗಳ ಸಶಸ್ತ್ರ ಪಡೆಗಳ ನಡುವಿನ ಕಾರ್ಯಾಚರಣೆಯ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಅತ್ಯಂತ ಮಹತ್ವದ ಹೆಜ್ಜೆಯಾಗಿದೆ ಎಂದು ಆಸ್ಟ್ರೇಲಿಯಾ ರಕ್ಷಣಾ ಸಚಿವ ರಿಚರ್ಡ್ ಮಾರ್ಲೆಸ್ ಹೇಳಿದರು. ಇದೇ ವೇಳೆ ರಾಜನಾಥ್ ಸಿಂಗ್ ಅವರು, ಆಸ್ಟ್ರೇಲಿಯಾ ಆಂಥೋನಿ ಅಲ್ಬನೀಸ್ ಅವರೊಂದಿಗೆ ಸಭೆ ನಡೆಸಿದರು. ಭಾರತ-ಆಸ್ಟ್ರೇಲಿಯಾ

ದ್ವಿಪಕ್ಷೀಯ ಸಂಬಂಧವು ಆಳವಾಗಿ ಮತ್ತು ಬಲವಾಗಿ ಬೆಳೆಯುವುದು ಮುಂದುವರಿಯುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಿಶ್ವಾಸ ವ್ಯಕ್ತಪಡಿಸಿದರು.

***************

ಜಾಗತಿಕ ಆರ್ಥಿಕ ಬೆಳವಣಿಗೆಯನ್ನು ಮುನ್ನಡೆಸುವಲ್ಲಿ ಭಾರತದ ಪಾತ್ರವನ್ನು ಅಂತಾರಾಷ್ಟ್ರೀಯ ಹಣಕಾಸು ನಿಧಿ - ಐಎಂಎಫ್ ವ್ಯವಸ್ಥಾಪಕ ನಿರ್ದೇಶಕಿ ಕ್ರಿಸ್ಟಲಿನಾ ಜಾರ್ಜಿವಾ ಶ್ಲಾಘಿಸಿದ್ದಾರೆ. ಜಾಗತಿಕ ಬೆಳವಣಿಗೆಯ ಮಾದರಿಗಳು ಬದಲಾಗುತ್ತಿವೆ. ವಿಶೇಷವಾಗಿ ಚೀನಾದ ಬೆಳವಣಿಗೆ ಸ್ಥಿರವಾಗಿ ಕಡಿಮೆಯಾಗುತ್ತಿದೆ. ಆದರೆ ಭಾರತ ಪ್ರಮುಖ ಬೆಳವಣಿಗೆಯ ಎಂಜಿನ್ ಆಗಿ ಅಭಿವೃದ್ಧಿ ಹೊಂದುತ್ತಿದೆ ಎಂದು ಅವರು ಹೇಳಿದರು. ಈ ವರ್ಷ ಜಾಗತಿಕ ಆರ್ಥಿಕತೆಯು ಶೇಕಡ ೩ರಷ್ಟು ಬೆಳೆಯುವ ನಿರೀಕ್ಷೆಯಿದೆ ಎಂದು ಐಎಂಎಫ್ ಘೋಷಿಸಿದೆ.

***************

ನ್ಯಾಯ ವಿತರಣಾ ವ್ಯವಸ್ಥೆಗೆ ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ ನೀಡಿರುವ ಮಹತ್ವದ ಕೊಡುಗೆಯನ್ನು ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಶ್ಲಾಘಿಸಿದ್ದಾರೆ. ನವದೆಹಲಿಯಲ್ಲಿ ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿ ಆಯೋಜಿಸಿದ್ದ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದ ಅವರು, ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿಯಲ್ಲಿ ಕಳೆದ ೫ ವರ್ಷಗಳ ಹಿಂದೆ ೮೫ ಸಾವಿರ ಇದ್ದ ಬಾಕಿ ಪ್ರಕರಣಗಳು ಇದೀಗ ೨೪ ಸಾವಿರಕ್ಕೆ ಇಳಿದಿದೆ ಎಂದರು. ಸಮಕಾಲೀನ ಸವಾಲುಗಳನ್ನು ಎದುರಿಸಲು ರಚನಾತ್ಮಕ ಮತ್ತು ಕಾರ್ಯವಿಧಾನದ ಸುಧಾರಣೆಗಳ ಮೇಲೆ ಗಮನ ಹರಿಸಬೇಕಿದೆ ಎಂದು ಅವರು ಮನವಿ ಮಾಡಿದರು.

***************

ಅಮೆರಿಕ ಮಧ್ಯಸ್ಥಿಕೆಯ ಶಾಂತಿ ಒಪ್ಪಂದದ ಮೊದಲ ಹಂತಕ್ಕೆ ಇಸ್ರೇಲ್ ಮತ್ತು ಹಮಾಸ್ ಸಹಿ ಹಾಕಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಎರಡು ವರ್ಷಗಳ ಯುದ್ಧವನ್ನು ಕೊನೆಗೊಳಿಸಲು, ಗಾಜಾದಲ್ಲಿ ಹೋರಾಟವನ್ನು ನಿಲ್ಲಿಸಲು ಮತ್ತು ಒತ್ತೆಯಾಳುಗಳನ್ನು ಬಿಡುಗಡೆ ಮಾಡಲು, ಈಜಿಪ್ಟ್‌ನ ಶರ್ಮ್ ಎಲ್-ಶೇಖ್‌ನಲ್ಲಿ ನಡೆದ ಮಾತುಕತೆಗಳ ನಂತರ ಟ್ರಂಪ್ ಅವರ ಘೋಷಣೆ ಹೊರಬಿದ್ದಿದೆ. ವರದಿಗಳ ಪ್ರಕಾರ, ಒಪ್ಪಂದದ ಮೊದಲ ಹಂತದಲ್ಲಿ

ಹಲವಾರು ಪ್ಯಾಲೆಸ್ಟೀನಿಯನ್ ಕೈದಿಗಳಿಗೆ ಬದಲಾಗಿ ಹಮಾಸ್ ಸೆರೆಯಲ್ಲಿರುವ ಎಲ್ಲಾ ಉಳಿದ ಒತ್ತೆಯಾಳುಗಳ ಬಿಡುಗಡೆ ಮತ್ತು ಗಾಜಾದಿಂದ ಇಸ್ರೇಲ್ ಹಂತ-ಹಂತವಾಗಿ ತನ್ನ ಹಿಡಿತ ಸಡಲಿಸುವ ಕ್ರಮಗಳು ಸೇರಿವೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಈ ಕ್ರಮವನ್ನು ಸ್ವಾಗತಿಸಿದ್ದಾರೆ. ಇದೇ ವೇಳೆ ಅಮೆರಿಕ ಮಧ್ಯಸ್ಥಿಕೆಯಲ್ಲಿ ಇಸ್ರೇಲ್ ಮತ್ತು ಹಮಾಸ್ ನಡುವಿನ ಮೊದಲ ಹಂತದ ಶಾಂತಿ ಒಪ್ಪಂದವನ್ನು ಪ್ರಧಾನಿ ನರೇಂದ್ರ ಮೋದಿ ಸ್ವಾಗತಿಸಿದ್ದಾರೆ. ಒತ್ತೆಯಾಳುಗಳ ಬಿಡುಗಡೆ ಮತ್ತು ಗಾಜಾದ ಜನರಿಗೆ ಹೆಚ್ಚಿನ ಮಾನವೀಯ ನೆರವು ನೀಡುವುದರಿಂದ ಶಾಶ್ವತ ಶಾಂತಿಗೆ ದಾರಿ ಮಾಡಿಕೊಡುತ್ತದೆ ಎಂದು ಅವರು ಆಶಿಸಿದ್ದಾರೆ. ಇದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಬಲವಾದ ನಾಯಕತ್ವದ ಪ್ರತಿಬಿಂಬವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

***************

ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಹಿರಿಯ ನಾಗರಿಕರು, ದಿವ್ಯಾಂಗರು ಮತ್ತು ಸೇವಾ ಮತದಾರರು ಅಂಚೆ ಮತಪತ್ರವನ್ನು ಬಳಸಿಕೊಂಡು ಮತ ಚಲಾಯಿಸಲು ಚುನಾವಣಾ ಆಯೋಗ ಅನುಕೂಲ ಕಲ್ಪಿಸಲಿದೆ. ೮೫ ವರ್ಷಕ್ಕಿಂತ ಮೇಲ್ಪಟ್ಟ ಮತದಾರರು ಮತ್ತು ದಿವ್ಯಾಂಗ ಮತದಾರರು ಅಂಚೆ ಮತಪತ್ರದ ಮೂಲಕ ಮತ ಚಲಾಯಿಸಬಹುದು. ಅಂತಹ ಮತದಾರರು ಫಾರ್ಮ್ ೧೨ ಡಿ ಬಳಸಿ ಈ ಸೌಲಭ್ಯವನ್ನು ಪಡೆಯಬಹುದು ಮತ್ತು ಚುನಾವಣೆಯ ಅಧಿಸೂಚನೆ ಹೊರಡಿಸಿದ ಐದು ದಿನಗಳಲ್ಲಿ ತಮ್ಮ ಬೂತ್ ಮಟ್ಟದ ಅಧಿಕಾರಿ ಮೂಲಕ ಚುನಾವಣಾ ಅಧಿಕಾರಿಗೆ ಸಲ್ಲಿಸಬಹುದು ಎಂದು ಆಯೋಗ ತಿಳಿಸಿದೆ. ಮತದಾನದ ದಿನಾಂಕದಂದು ಅಗತ್ಯ ಸೇವೆಗಳಲ್ಲಿರುವ ಮತದಾರರು ತಮ್ಮ ಸಂಬಂಧಪಟ್ಟ ಇಲಾಖೆಯ ಗೊತ್ತುಪಡಿಸಿದ ನೋಡಲ್ ಅಧಿಕಾರಿ ಮೂಲಕ ಅಂಚೆ ಮತಪತ್ರ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದು ಎಂದು ಚುನಾವಣಾ ಆಯೋಗ ಹೇಳಿದೆ.

***************

ಬಬ್ಬರ್ ಖಾಲ್ಸಾ ಇಂಟರ್ ನ್ಯಾಷನಲ್ ಭಯೋತ್ಪಾದಕ ಸಂಘಟನೆಯ ಇಬ್ಬರು ಉಗ್ರರನ್ನು ಪಂಜಾಬ್‌ನ ಜಲಂಧರ್‌ನಲ್ಲಿ ಪೊಲೀಸರು ಬಂಧಿಸಿದ್ದು, ಅವರಿಂದ ೨.೫ ಕಿಲೋಗ್ರಾಮ್

ಆರ್‌ಡಿಎಕ್ಸ್ ವಶಪಡಿಸಿಕೊಂಡಿದ್ದಾರೆ. ಬಂಧಿತರನ್ನು ಜಲಂಧರ್‌ನ ಗುರ್ಜಿಂದರ್ ಸಿಂಗ್ ಮತ್ತು ದಿವಾನ್ ಸಿಂಗ್ ಎಂದು ಗುರುತಿಸಲಾಗಿದೆ. ಅಲ್ಲದೇ ಬಂಧಿತರಿಂದ ಒಂದು ಸುಧಾರಿತ ಸ್ಫೋಟಕ ಸಾಧನ ಮತ್ತು ಒಂದು ರಿಮೋಟ್ ಕಂಟ್ರೋಲ್ ಅನ್ನು ಸಹ ವಶಪಡಿಸಿಕೊಳ್ಳಲಾಗಿದೆ. ಬಬ್ಬರ್ ಖಾಲ್ಸಾ ಇಂಟರ್ ನ್ಯಾಷನಲ್ ಮಾಸ್ಟರ್ ಮೈಂಡ್ ಹರ್ವಿಂದರ್ ಸಿಂಗ್ ರಿಂಡಾ ನಿರ್ದೇಶನದ ಮೇರೆಗೆ ಬ್ರಿಟನ್ ಮೂಲದ ಹ್ಯಾಂಡರ್‌ಗಳು ಭಾರತದಲ್ಲಿ ಭಯೋತ್ಪಾದಕ ದಾಳಿಗೆ ಸಂಚು ರೂಪಸಿದ್ದರು ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಇದಕ್ಕೂ ಮುನ್ನ ಇದೇ ವಾರದಲ್ಲಿ ಅಮೃತಸರದಲ್ಲಿ ಇಬ್ಬರು ಅಪರಿಚಿತ ವ್ಯಕ್ತಿಗಳಿಂದ ನಾಲ್ಕು ಹ್ಯಾಂಡ್ ಗ್ರೇನೇಡ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದರು.

****************

ಬಾಂಗ್ಲಾದೇಶದ ಢಾಕಾದ ಫಾರ್ಮ್‌ಗೇಟ್‌ನಲ್ಲಿರುವ ಹೋಲಿ ಕ್ರಾಸ್ ಕಾಲೇಜು ಮತ್ತು ಹೋಲಿ ರೋಜರಿ ಚರ್ಚ್ ಮುಂಭಾಗದಲ್ಲಿ ನಿನ್ನೆ ರಾತ್ರಿ ಸರಣಿ ಕಚ್ಚಾ ಬಾಂಬ್ ಸ್ಫೋಟಗಳು ಸಂಭವಿಸಿವೆ. ಸ್ಥಳೀಯ ಮಾಧ್ಯಮಗಳ ವರದಿ ಪ್ರಕಾರ, ನಿನ್ನೆ ರಾತ್ರಿ ೧೦ ಗಂಟೆ ೧೫ ನಿಮಿಷದ ಸುಮಾರಿಗೆ ಸರಣಿ ಸ್ಫೋಟಗಳು ಸಂಭವಿಸಿದ್ದು, ಇಲ್ಲಿಯವರೆಗೆ ಯಾವುದೇ ಸಾವು-ನೋವುಗಳು ವರದಿಯಾಗಿಲ್ಲ. ಆದರೆ ಸರಣಿ ಸ್ಫೋಟ ಸ್ಥಳೀಯರಲ್ಲಿ ಆತಂಕ ಉಂಟು ಮಾಡಿದೆ. ಇಬ್ಬರು ಅಪರಿಚಿತ ವ್ಯಕ್ತಿಗಳು ಕಚ್ಚಾಬಾಂಬ್‌ಗಳನ್ನು ಎಸೆದು ಪಲಾಯನ ಮಾಡಿರುವುದನ್ನು ಪ್ರತ್ಯಕ್ಷದರ್ಶಿಗಳು ಕಂಡಿದ್ದಾರೆ. ಸ್ಥಳಕ್ಕೆ ಪೊಲೀಸರು ಧಾವಿಸಿದ್ದು, ಎರಡು ಸ್ಫೋಟಕ ಸಾಧನಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

****************

ವಿಶಾಖಪಟ್ಟಣದಲ್ಲಿ ಇಂದು ನಡೆಯುವ ಐಸಿಸಿ ಮಹಿಳೆಯರ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

****************

ಮುಂದಿನ ೨ ರಿಂದ ೩ ದಿನಗಳಲ್ಲಿ ಕರ್ನಾಟಕ, ತಮಿಳುನಾಡು, ಕೇರಳ, ಮಾಹೆ, ದಕ್ಷಿಣ ಒಳನಾಡು, ಆಂಧ್ರಪ್ರದೇಶದ ಕರಾವಳಿ, ಯಾಣಂ ಮತ್ತು ರಾಯಲಸೀಮಾದ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗಲಿದೆ. ಇದೇ ವೇಳೆ ಇಂದು ಮತ್ತು ನಾಳೆ ಲಕ್ಷದ್ವೀಪ ಮತ್ತು ಕರಾವಳಿ ಕರ್ನಾಟಕದಾದ್ಯಂತ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

****************